ಮೈಸೂರ ಗೆಜೆಟ್

ಸರ್ಕಾರದಿಂದ ಪ್ರಾಯಿಷ್ ಆದ್ದು.

ಬೆಂಗಳೂರು, ಶನಿವಾರ, ನವೆಂಬರ್ ತಾ|| 8, -ಸ್ 1884.

ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

2ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರುವಗೈರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿರ್ಮಾಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡಿ ಸಲ್ಲತಕ್ಕ ಬಗ್ಗೆ; ಷರಾ ಬರೆಯಲ್ಪಡಬಹುದಾದಂತಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕೌಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫೇಸ್‌ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಬ್ಲಿ ಕೇಟಾದ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಿರ್ಸ,
ಕಾಂಪ್ಟ್ರೋಲರ್.

ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್‌ಜಡ್ಜ್‌ರಯವರ ಕೋರ್ಟ್‌ನಲ್ಲಿ.

ದಿವಾಳಿಯಾದ ಡಿಕ್ರಿ ದೇನೇದಾರ ಗುಬ್ಬಿ ಸ್ಥಳದ ಸಂಜೀವಯ್ಯನ ವಿಷಯದಲ್ಲಿ.

ಸ್ 1884ನೇ ಇಸವಿ ದಿವಾಳಿ ವ್ಯಾಜ್ಯ ನಂಬರ್ 42.

ಹುಕುಂ.

ಮೇಲ್ಕಂಡ ಸಂಜೀವಯ್ಯನು ಖುಲಾಸೆಯಾಗಬೇಕೆಂದು ಕೋರಿ ಬರಮಾಡಿಕೊಂಡ ಅರ್ಜಿಯು ಸಬ್ ಜಡ್ಜ್‌ರಾದ ಸಿ. ಕೈಸ್ ಸಾಹೇಬರವರ ರೂಬರೂ ಅರ್ಜೀದಾರನ ಪರವಾಗಿ ಸಮಕ್ಷಮದಲ್ಲಿಯೂ ಮತ್ತು ಐರ್ಜ ಅರ್ಜೀದಾರನ ಲೇಣೇದಾರರಾದ 1ನೇ ಮದೋಡಪ್ಪನ ಕಡೆ